ದಿನಾಂಕಃ 18.06.2026 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ : ವಾದಿ ಪರ ವಕೀಲರಿಂದ :</u>**

ಸಾಕ್ಷಿ ತಮ್ಮ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿ, ಸದರಿ ಪ್ರಮಾಣ ಪತ್ರದಲ್ಲಿ ಬರೆಸಿರುವ ವಿಷಯಗಳನ್ನು ಓದಿಸಿ, ಕೇಳಿ ತಿಳಿದುಕೊಂಡು ಸರಿ ಮತ್ತು ಸತ್ಯವಾಗಿರುತ್ತವೆ ಎಂದು ಸಹಿ ಮಾಡಿರುವುದಾಗಿ ತಿಳಿಸಿರುತ್ತಾರೆ.

ಪ್ರತಿವಾದಿಯು ಬರೆದುಕೊಟ್ಟ ಪ್ರಾಮಿಸರಿ ನೋಟನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿರುವ ಪ್ರತಿವಾದಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ನಿಪಿ-1 ಕ್ಕೆ ಸಾಕ್ಷಿದಾರರಾಗಿ ಚಂದ್ರಶೇಖರ್ ಮತ್ತು ವಿಶ್ವೇಶ್ವರ ರವರು ಸಹಿ ಮಾಡಿದ್ದು ಸದರಿರವರ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-1(ಬಿ) ಮತ್ತು ನಿಪಿ-1(ಸಿ) ಎಂದು ಗುರುತಿಸಲಾಯಿತು. ಸದರಿ ಪತ್ರವನ್ನು ಪತ್ರಬರಹಗಾರರಾದ ಶ್ರೀಧರ್ ರವರು ಬರೆದಿದ್ದು ಅವರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಡಿ) ಎಂದು ಗುರುತಿಸಲಾಯಿತು.

ನಿಪಿ-1 ರಲ್ಲಿ ಹಣ ಸಂದ ರಶೀದಿ ಇದ್ದು ಅದರಲ್ಲಿಯೂ ಸಹ ಮೇಲೆ ಹೇಳಿರುವವರು ಸಹಿ ಮಾಡಿರುತ್ತಾರೆ.

ನೋಟೀಸನ್ನು ನಿಪಿ-2 ಎಂದು, ಹಿಂದಿರುಗಿ ಬಂದ ಅಂಚೆ ಲಕೋಟೆಯನ್ನು ನಿಪಿ-3 ಎಂದು ಗುರುತಿಸಲಾಯಿತು.

ಆದ್ದರಿಂದ, ದಾವಾವನ್ನು ಡಿಕ್ರಿ ಮಾಡಬೇಕೆಂದು ಪ್ರಾರ್ಥನೆ.

***ಪ್ರತಿವಾದಿ ಏಕಪಕ್ಷೀಯವಾಗಿರುವುದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.***

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**